**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ ಸಿ 1565/2020**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ದಿನಾಂಕಃ 01-06-2024** **ಪಿ.ಡಬ್ಲ್ಯೂ 1**

**ಪಾಟೀ ಸವಾಲುಃ ವಾದಿ ಪರ ಶ್ರೀ ಯು ಹೆಚ್ ವಕೀಲರಿಂದಃ**

ನಾನು 8 ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನನಗೆ ಕನ್ನಡ ಓದಲು ಮತ್ತು ಬರೆಯಲು ಬರುತ್ತದೆ. ಇಂಗ್ಲೀಷ್ ಓದಲು ಮತ್ತು ಬರೆಯಲು ಬರುವುದಿಲ್ಲ. ನಾನು ವ್ಯವಸಾಯ ಮಾಡುತ್ತೇನೆ. ಆರೋಪಿ ಟಾಟಾ ಸಿಮ್ 1 ಚಾಲನೆ ಮಾಡುತ್ತಾರೆ ಮತ್ತು ವ್ಯವಸಾಯ ಮಾಡುತ್ತಾರೆ. ನಿಪಿ.3 ಕ್ಕೆ ಮಾಹಿತಿಯನ್ನು ನನ್ನ ವಕೀಲರು ನೀಡಿರುತ್ತಾರೆ. ನಿಪಿ.3 ರಲ್ಲಿ ನಿಮ್ಮ ಮತ್ತು ಆರೋಪಿಯ ಉದ್ಯೋಗದ ಬಗ್ಗೆ ನಮೂದಿಸಿದ್ದೀರಾ ಎಂದರೆ ಸಾಕ್ಷಿಯು ನಮ್ಮ ಉದ್ಯೋಗದ ಬಗ್ಗೆ ನಮೂದಿಸಿದ್ದೇನೆ ಎಂದು ನುಡಿಯುತ್ತಾರೆ. ನಾಗರಾಜ ಡಿ ತಂದೆ ದೇವೇಂದ್ರಪ್ಪ ಅಂದರೆ ನಾನೇ ಎಂದರೆ ಸರಿ. ಸಾಕ್ಷಿಗೆ ನಿಪಿ.3 ನ್ನು ತೋರಿಸಲಾಗಿ ಇದರಲ್ಲಿ ಏನು ಬರೆದಿದೆ ಎಂದರೆ ನನಗೆ ಓದಲು ಬರುವುದಿಲ್ಲ ಎಂದು ನುಡಿಯುತ್ತಾರೆ. ನಿಪಿ.3 ರಲ್ಲಿ ನಾನು ಏನು ಕೆಲಸ ಮಾಡುತ್ತೇನೆ ಎಂದು ಬರೆಸಿಲ್ಲ ಆದರೂ ಸಹ ನನ್ನ ಕೆಲಸದ ಬಗ್ಗೆ ಹೇಳಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.3 ನ್ನು ನನ್ನ ವಕೀಲರು ನನಗೆ ಓದಿ ಹೇಳಿದ ನಂತರ ನಾನು ಸಹಿ ಮಾಡಿರುತ್ತೇನೆ. ನಾನು ವ್ಯವಸಾಯ ವೃತ್ತಿಯನ್ನು ಮಾಡುತ್ತೇನೆಂದು ನನ್ನ ವಕೀಲರಿಗೆ ಹೇಳಿದ್ದೇನೆ. ನನ್ನ ವೃತ್ತಿಯ ಬಗ್ಗೆ ನಿಪಿ.3 ರಲ್ಲಿ ನಮೂದಿಸಿದ್ದಾರಾ ಅಥವಾ ಇಲ್ಲ ಎಂದು ನಾನು ತಿಳಿದುಕೊಂಡಿಲ್ಲ. ನಿಪಿ.3 ರಲ್ಲಿ ಬರೆದಿರುವ ಅಂಶಗಳನ್ನು ನೀನು ತಿಳಿದುಕೊಂಡಿಲ್ಲ ಎಂದರೆ ಸಾಕ್ಷಿಯು ವಕೀಲರು ಹೇಳಿರುತ್ತಾರೆ ಎಂದು ನುಡಿಯುತ್ತಾರೆ. ಈ ರೀತಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲಿಗಾಗಿ ಸಮಯ ಕೋರಿದ್ದು ಮುಂದೂಡಲಾಯಿತು.

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆ ಎಂ ಎಫ್ ಸಿ, ಹರಿಹರ